ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಸೋಮವಾರ, ದಿನಾಂಕ : 21 ನೇ ಸೆಪ್ಟೆಂಬರ್, 2020

ವಿಶ್ವವಿದ್ಯಾಲಯಗಳಲ್ಲಿ ನಡೆದಿರುವ ಅಕ್ರಮಗಳ ಕುರಿತು

ಶ್ರೀ ರಘುನಾಥ್‌ರಾವ್ ಮಲ್ಕಾಪೂರೆ(ವಿಧಾನಸಭೆಯಿಂದ ಚುನಾಯಿತರಾದವರು) -

88 (105) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ರಾಜ್ಯದಲ್ಲಿ ಕಳೆದ 3 ವರ್ಷಗಳಿಂದ ಯಾವ ಯಾವ ವಿಶ್ವವಿದ್ಯಾಲಯಗಳಲ್ಲಿ ಅಕ್ರಮ ನೇಮಕಾತಿ ಭ್ರಷ್ಟಾಚಾರ ಮತ್ತು ನಕಲಿ ಅಂಕಪಟ್ಟಿ ಪ್ರಕರಣಗಳು ಪತ್ತೆಯಾಗಿವೇ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಹಾಗಿದ್ದಲ್ಲಿ, ಇಂತಹ ಪ್ರಕರಣಗಳಲ್ಲಿ ಭಾಗಿಯಾಗಿರುವವರು ಯಾರ್ಯಾರು; (ವಿಶ್ವವಿದ್ಯಾಲಯಗಳವಾರು ಮಾಹಿತಿ ಒದಗಿಸುವುದು)

(ಇ) ನಕಲಿ ಪ್ರಕರಣಗಳಲ್ಲಿ ಭಾಗಿಯಾದವರ ವಿರುದ್ಧ ಸರ್ಕಾರವು ಸಂಬಂಧಪಟ್ಟ ವಿಶ್ವವಿದ್ಯಾಲಯಗಳ ವಿರುದ್ಧ ಯಾವ ಯಾವ ಶಿಸ್ತಿನ ಕ್ರಮಗಳನ್ನು ಹಾಗೂ ಯಾರ ಯಾರ ಮೇಲೆ ಮೊಕದ್ದಮೆಗಳನ್ನು ದಾಖಲಿಸಿದೆ; (ವಿವರ ನೀಡುವುದು)

(ಈ) ರಾಜ್ಯದ ವಿಶ್ವವಿದ್ಯಾಲಯಗಳನ್ನು ಭ್ರಷ್ಟಾಚಾರ ಮುಕ್ತ ಮತ್ತು ಪಾರದರ್ಶಕ ಆಡಳಿತ ನಡೆಸುವಂತೆ ಮಾಡಲು ಸಕಾರ ಕೈಗೊಳ್ಳಲಿರುವ ಕ್ರಮಗಳೇನು?